# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 678 |
| ಸದಸ್ಯರ ಹೆಸರು | : | ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21/02/2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಂಗನವಾಡಿಗಳಿಗೆ ಪೌಷ್ಠಿಕ ಆಹಾರ ಪದಾರ್ಥಗಳನ್ನು ಯಾವ ಸಂಘ ಸಂಸ್ಥೆಗಳ ಮೂಲಕ ಪೂರೈಸಲಾಗುತ್ತಿದೆ; ಯಾವ ಮಾನದಂಡಗಳ ಮೇಲೆ ಆಯ್ಕೆ ಮಾಡಲಾಗುತ್ತಿದೆ; ಆಹಾರ ಪೂರೈಕೆಗೆ ಇಲಾಖೆಯಿಂದ ವಾರ್ಷಿಕವಾಗಿ ಎಷ್ಟು ಖರ್ಚು ಮಾಡಲಾಗುತ್ತಿದೆ; | ಅಂಗನವಾಡಿ ಕೇಂದ್ರಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ರಾಜ್ಯದಲ್ಲಿರುವ 137 ಎಂ.ಎಸ್.ಪಿ.ಟಿ.ಸಿ. (ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ & ತರಬೇತಿ ಕೇಂದ್ರ) ಗಳಿಂದ ಸರಬರಾಜು ಮಾಡಲಾಗುತ್ತಿದೆ.<br><br>ರಿಟ್ ಅರ್ಜಿ ಸಂಖ್ಯೆ: 196/2001 ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ್ದ ಮಧ್ಯಂತರ ಆದೇಶದಂತೆ ರಾಜ್ಯ ಸರ್ಕಾರವು 22 ರಿಂದ 32 ಮಹಿಳೆಯರನ್ನೊಳಗೊಂಡ ಎಂ.ಎಸ್.ಪಿ.ಟಿ.ಸಿ. ಗಳನ್ನು ಸ್ಥಾಪಿಸಲು ಟೆಂಡರ್ ಕರೆದು ಬಲವರ್ಧಕರನ್ನು ಆಯ್ಕೆ ಮಾಡಲಾಗಿತ್ತು. ಇವರ ಮೂಲಕ 137 ಎಂ.ಎಸ್.ಪಿ.ಟಿ.ಸಿ. ಗಳನ್ನು ಸ್ಥಾಪಿಸಲಾಗಿರುತ್ತದೆ.<br><br>ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮಕ್ಕೆ 2021-22ನೇ ಸಾಲಿನಲ್ಲಿ ರೂ.1952.14 ಕೋಟಿಗಳನ್ನು ಖರ್ಚು ಮಾಡಲಾಗಿರುತ್ತದೆ. |
| ಆ) | ರಾಜ್ಯದಲ್ಲಿ ಹಲವಾರು ಅರ್ಹತೆ ಪಡೆದ ಮಹಿಳಾ/ ಸ್ವಸಹಾಯ ಸಂಘ ಸಂಸ್ಥೆಗಳಿದ್ದರೂ ಸಹ ಕೇವಲ ಕೆಲವೇ ಸಂಸ್ಥೆಗಳಿಗೆ ಅನುಮತಿ ನೀಡಿರುವುದಕ್ಕೆ ಕಾರಣಗಳೇನು: (ಸ್ಪಷ್ಟ ವಿವರ ನೀಡುವುದು) | ರಿಟ್ ಅರ್ಜಿ ಸಂಖ್ಯೆ: 196/2001 ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ್ದ ಮಧ್ಯಂತರ ಆದೇಶದಂತೆ ರಾಜ್ಯ ಸರ್ಕಾರವು 22 ರಿಂದ 32 ಮಹಿಳೆಯರನ್ನೊಳಗೊಂಡ ಎಂ.ಎಸ್.ಪಿ.ಟಿ.ಸಿ. ಗಳನ್ನು ಸ್ಥಾಪಿಸಲು ಟೆಂಡರ್ ಕರೆದು ಬಲವರ್ಧಕರನ್ನು ಆಯ್ಕೆ ಮಾಡಲಾಗಿತ್ತು. ಇವರ ಮೂಲಕ 137 ಎಂ.ಎಸ್.ಪಿ.ಟಿ.ಸಿ. ಗಳನ್ನು ಸ್ಥಾಪಿಸಲಾಗಿರುತ್ತದೆ. ಈ ಎಂ.ಎಸ್.ಪಿ.ಟಿ.ಸಿ. ಗಳು ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದಡಿ ಅಂಗನವಾಡಿ ಫಲಾನುಭವಿಗಳಿಗೆ ಅಗತ್ಯವಿರುವ ಆಹಾರ ಪದಾರ್ಥಗಳನ್ನು ತಯಾರಿಸಿ ಸರಬರಾಜು ಮಾಡುತ್ತಿವೆ. |
| ಇ) | ಕಪ್ಪುಪಟ್ಟಿಗೆ ಸೇರಿದ ಸಂಸ್ಥೆಗಳು ಅಂಗನವಾಡಿಗಳಿಗೆ ಆಹಾರ ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅದೇ ಸಂಘಕ್ಕೆ ಪೌಷ್ಠಿಕ ಆಹಾರ ಪೂರೈಕೆಗೆ ಅವಕಾಶ ನೀಡಲು ಕಾರಣಗಳೇನು ? | ಅಂಗನವಾಡಿ ಕೇಂದ್ರಗಳಿಗೆ ಇಲಾಖಾ ವತಿಯಿಂದ ಸ್ಥಾಪಿಸಲ್ಪಟ್ಟ 137 ಎಂ.ಎಸ್.ಪಿ.ಟಿ.ಸಿ. ಗಳು ಪೂರಕ ಪೌಷ್ಠಿಕ ಆಹಾರ ಪದಾರ್ಥಗಳನ್ನು ಪೂರೈಸುತ್ತಿವೆ. ಕಪ್ಪುಪಟ್ಟಿಗೆ ಸೇರಿದ ಸಂಸ್ಥೆಗಳು ಆಹಾರ ಪದಾರ್ಥಗಳನ್ನು ಪೂರೈಸುತ್ತಿರುವುದಿಲ್ಲ. |

**ಸಂಖ್ಯೆ:ಮಮಇ 34 ಐಸಿಡಿ 2023**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.